# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | (702) 598 |
| ಸದಸ್ಯರ ಹೆಸರು | : | ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 12-12-2025 |
| ಉತ್ತರಿಸುವ ಸಚಿವರು | : | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕನ್ನಡ ಪುಸ್ತಕ ಪ್ರಾಧಿಕಾರ ಹಮ್ಮಿಕೊಂಡಿರುವ ಮನೆಗೊಂದು ಗ್ರಂಥಾಲಯ ಯೋಜನೆ ಜಾರಿಗೆ ಬಂದಿದ್ದು ಯಾವಾಗ; | ಸನ್ಮಾನ್ಯ ಮುಖ್ಯಮಂತ್ರಿಯವರು ದಿನಾಂಕ 13.01.2025ರಂದು ಗೃಹ ಕಚೇರಿ ಕೃಷ್ಣದಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರದ ವತಿಯಿಂದ ಹಮ್ಮಿಕೊಂಡಿದ್ದ ಮನೆಗೊಂದು ಗ್ರಂಥಾಲಯ ಯೋಜನೆಗೆ ಚಾಲನೆ ನೀಡಿರುತ್ತಾರೆ. |
| ಆ) | ಬಂದಿದ್ದರೆ, ಅದರಡಿ ಎಷ್ಟು ಗ್ರಂಥಾಲಯಗಳು ಪ್ರಾರಂಭವಾಗಿವೆ; (ಜಿಲ್ಲಾವಾರು ಮಾಹಿತಿ ನೀಡುವುದು) | ಕನ್ನಡ ಪುಸ್ತಕ ಪ್ರಾಧಿಕಾರ ರೂಪಿಸಿರುವ ಮನೆಗೊಂದು ಗ್ರಂಥಾಲಯ ಯೋಜನೆಯ ಮೂಲ ಉದ್ದೇಶ ಪ್ರತಿಯೊಂದು ಮನೆಯಲ್ಲೂ ಪುಸ್ತಕ ಸಂಗ್ರಹ ಮಾಡುವುದನ್ನು ಪ್ರೋತ್ಸಾಹಿಸುವುದೇ ಹೊರತು, ಪ್ರಾಧಿಕಾರವೇ ಸ್ವತಃ ಗ್ರಂಥಾಲಯ ಸ್ಥಾಪನೆ ಮಾಡುವುದಲ್ಲ. ಗಮನಾರ್ಹ ಪ್ರಮಾಣದಲ್ಲಿ ಪುಸ್ತಕ ಸಂಗ್ರಹ ಇರುವ ಮನೆಯವರನ್ನು ಗುರುತಿಸಿ ಅವರಿಗೆ ಕನ್ನಡ ಪುಸ್ತಕ ಪ್ರಾಧಿಕಾರದಿಂದ ಪ್ರಶಂಸಾ ಪತ್ರ ನೀಡುವುದರ ಮೂಲಕ ಉತ್ತೇಜನ ನೀಡುವುದು. ಆ ಮೂಲಕ ಇತರರು ತಮ್ಮ ತಮ್ಮ ಮನೆಯಲ್ಲಿ ಪುಸ್ತಕಗಳನ್ನು ಸಂಗ್ರಹಿಸಿ ಪುಟ್ಟ ಗ್ರಂಥಾಲಯವನ್ನು ಆರಂಭಿಸುವಂತೆ ಪ್ರೋತ್ಸಾಹಿಸುವುದು ಈ ಯೋಜನೆಯ ಮುಖ್ಯ ಆಶಯವಾಗಿದೆಯೇ ಹೊರತು ಸ್ವತಃ ಪ್ರಾಧಿಕಾರದಿಂದಲೇ ಗ್ರಂಥಾಲಯಗಳನ್ನು ಸ್ಥಾಪನೆ ಮಾಡುವುದಿಲ್ಲ.<br><br>ಇದರ ಮೂಲಕ ಮನೆಗಳಲ್ಲಿ ಪುಸ್ತಕ ಸಂಗ್ರಹ ಪ್ರೋತ್ಸಾಹಿಸಿದರೆ ಬರೆಯುವ ಲೇಖಕರು, ಪ್ರಕಟಿಸುವ ಪ್ರಕಾಶಕರು, ಪುಸ್ತಕ ಮುದ್ರಕರು, ಮಾರಾಟಗಾರರು ಹೀಗೆ ಪುಸ್ತಕೋದ್ಯಮದ ಸರಣಿಯನ್ನೇ ಉತ್ತೇಜಿಸುವಂತಹ ಪ್ರಕ್ರಿಯೆಗೆ ಚಾಲನೆ ನೀಡಿದಂತಾಗುತ್ತದೆ. ಇದು ಈ ಯೋಜನೆಯ ಮೂಲ ಪರಿಕಲ್ಪನೆ.<br><br>ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ ಈ ಯೋಜನೆಗೆ ಸಂಚಾಲಕರನ್ನು ಗುರುತಿಸಿ ಅವರ ಮೂಲಕ ಮನೆ |

| | | |
|---|---|---|
| | | ಮನೆಗಳಲ್ಲಿ ಗ್ರಂಥಾಲಯ ಸೃಜನೆಗೆ ಪ್ರೋತ್ಸಾಹ ನೀಡುವುದು ಹಾಗೂ ಅದನ್ನು ಅನುಷ್ಠಾನಗೊಳಿಸಿದವರ ಮನೆಯಲ್ಲಿ ಸಣ್ಣದಾದ ಕಾರ್ಯಕ್ರಮ ಆಯೋಜಿಸಿ ಅವರಿಗೆ ಕನ್ನಡ ಪುಸ್ತಕ ಪ್ರಾಧಿಕಾರದ ಪರವಾಗಿ ಪ್ರಶಂಸಾ ಪತ್ರ ನೀಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ.<br><br>ಈ ಯೋಜನೆಯು ಈಗ ಪ್ರಾರಂಭಿಕ ಹಂತದಲ್ಲಿದ್ದು, ದಕ್ಷಿಣ ಕನ್ನಡ, ಉಡುಪಿ, ಬೆಂಗಳೂರು, ವಿಜಯಪುರ, ಕೊಪ್ಪಳ ಹಾಗೂ ಮೈಸೂರು ಜಿಲ್ಲೆಗಳಲ್ಲಿ ಈಗಾಗಲೇ ಸಂಚಾಲಕರನ್ನು ಗುರುತಿಸಲಾಗಿದ್ದು ಮುಂದಿನ ದಿನಗಳಲ್ಲಿ ಹಂತ ಹಂತವಾಗಿ ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ವಿಸ್ತರಿಸಲಾಗುವುದು.<br><br>ಈ ಯೋಜನೆಯು ಇನ್ನೂ ಪ್ರಾಯೋಗಿಕ ಹಂತದಲ್ಲಿದ್ದು, ದಿನಾಂಕ:30.11.2025ರಂದು ಮೈಸೂರಿನಲ್ಲಿ ಮಾನ್ಯ ಸಮಾಜ ಕಲ್ಯಾಣ ಇಲಾಖಾ ಸಚಿವರಾದ ಶ್ರೀ ಎಚ್.ಸಿ ಮಹದೇವಪ್ಪ ಅವರ ಮನೆಯೂ ಸೇರಿದಂತೆ, ಮೈಸೂರಿನ 10 ಮನೆಗಳಲ್ಲಿ ಮನೆಗೊಂದು ಗ್ರಂಥಾಲಯ ಕಾರ್ಯಕ್ರಮ ಆಯೋಜಿಸಿ ಪ್ರಶಂಸಾ ಪತ್ರಗಳನ್ನು ನೀಡಲಾಗುತ್ತಿದೆ. |
| ಇ) | ಸದರಿ ಯೋಜನೆಯಡಿ ಕಲಬುರ್ಗಿಯಲ್ಲಿ ಪ್ರಾರಂಭವಾದ ಗ್ರಂಥಾಲಯಗಳೆಷ್ಟು; | ಕಲಬುರಗಿಯಲ್ಲಿ ಡಿಸೆಂಬರ್ ಮಾಹೆಯಲ್ಲಿ ಈ ಯೋಜನೆಯ ಅನುಷ್ಠಾನಕ್ಕಾಗಿ ಸಂಚಾಲಕರನ್ನು ನಿಯೋಜಿಸಲು ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. |
| ಈ) | ಸದರಿ ಯೋಜನೆಯಡಿ ಶಾಸಕರ ಮನೆಗಳಲ್ಲಿ ಗ್ರಂಥಾಲಯಗಳನ್ನು ನಿರ್ಮಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ? | ಸದರಿ ಯೋಜನೆಯಡಿ ಯಾರ ಮನೆಯಲ್ಲೂ ಪ್ರಾಧಿಕಾರವೇ ಸ್ವತ: ಗ್ರಂಥಾಲಯವನ್ನು ಸ್ಥಾಪಿಸುವುದಿಲ್ಲ. ಆದರೆ ಗಮನಾರ್ಹ ಪ್ರಮಾಣದಲ್ಲಿ ಪುಸ್ತಕ ಸಂಗ್ರಹ ಹೊಂದಿರುವ ಶಾಸಕರುಗಳ ಮನೆಯಲ್ಲಿ ಈ ಯೋಜನೆಯ ಪರಿಕಲ್ಪನೆಯಂತೆ ಸಾಹಿತಿ ಯೊಬ್ಬರನ್ನು ಕರೆಯಿಸಿ ಅವರ ಮೂಲಕ ಪ್ರಶಂಸಾ ಪತ್ರವನ್ನು ನೀಡಲಾಗುತ್ತದೆ. |

ಸಂಖ್ಯೆ: ಕಸಂವಾ 473 ಕಸನಿ 2025

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.